## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ಮೆಟ್ರಿಕ್-ಪೂರ್ವ/ ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿ ರಚನೆ ಬಗ್ಗೆ.

ಓದಲಾಗಿದೆ:-1) ಆದೇಶ ಸಂಖ್ಯೆ: ಸಕಇ 197 ಬಿಎಂಎಸ್ 2008, ದಿ:07.01.2009

2) ಸೇರ್ಪಡೆ ಆದೇಶ ಸಂಖ್ಯೆ: ಸಕಇ 221 ಬಿಎಂಎಸ್ 2009, ದಿ.07.07.2009

***

ಪ್ರಸ್ತಾವನೆ:-

ಮೇಲ್ಕಂಡ ಓದಲಾದ (1)ರ ಆದೇಶದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳಿಗೆ ವಿದ್ಯಾರ್ಥಿಗಳನ್ನು ಆಯಾ ಕ್ಷೇತ್ರದ ಶಾಸಕರುಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಮಾಡಲು ತಾಲ್ಲೂಕು ಮಟ್ಟದ ಸಮಿತಿ ರಚಿಸಲಾಗಿತ್ತು. ತದನಂತರ ಓದಲಾದ (2)ರ ಸೇರ್ಪಡೆ ಆದೇಶದಲ್ಲಿ ಮೆಟ್ರಿಕ್-ಪೂರ್ವ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ತಾಲ್ಲೂಕು ಮಟ್ಟದ ಆಯ್ಕೆ ಸಮಿತಿ ರಚಿಸಿದಂತೆ ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗೂ ಸಹ ಅನ್ವಯಿಸುವಂತೆ ಆದೇಶ ಹೊರಡಿಸಲಾಗಿತ್ತು. ಆದರೆ ಸದರಿ ಸಮಿತಿಗಳನ್ನು ರದ್ದು ಪಡಿಸಿ ಆಯಾ ತಾಲ್ಲೂಕಿನ ಹೆಚ್ಚಿನ ಭಾಗ ಪ್ರತಿನಿಧಿಸುವ ವಿಧಾನಸಭಾ ಸದಸ್ಯರ ಅಧ್ಯಕ್ಷತೆಯಲ್ಲಿ ಸಮಿತಿ ಪುನರ್ ರಚಿಸುವಂತೆ ಸರ್ಕಾರ ತೀರ್ಮಾನಿಸಿರುತ್ತದೆ.

ಅದರಂತೆ ಆಯಾ ತಾಲ್ಲೂಕಿನ ಹೆಚ್ಚಿನ ಭಾಗ ಪ್ರತಿನಿಧಿಸುವ ವಿಧಾನಸಭಾ ಸದಸ್ಯರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ಪುನರ್ ರಚಿಸಲು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಆದೇಶ ಸಂಖ್ಯೆ: ಸಕಇ 221 ಬಿಎಂಎಸ್ 2009, ಬೆಂಗಳೂರು, ದಿನಾಂಕ 24-07-2009**

ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ಮೆಟ್ರಿಕ್-ಪೂರ್ವ ಹಾಗೂ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ಈ ಕೆಳಕಂಡಂತೆ ತಾಲ್ಲೂಕು ಮಟ್ಟದ ಆಯ್ಕೆ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

| | | |
|---|---|---|
| 1 | ತಾಲ್ಲೂಕಿನ ಹೆಚ್ಚಿನ ಭಾಗ ಪ್ರತಿನಿಧಿಸುವ ವಿಧಾನಸಭಾ ಸದಸ್ಯರು | ಅಧ್ಯಕ್ಷರು |
| 2 | ತಾಲ್ಲೂಕಿನ ಉಳಿದ ಭಾಗ ಪ್ರತಿನಿಧಿಸುವ ವಿಧಾನಸಭಾ ಸದಸ್ಯರು | ಸದಸ್ಯರು |
| 3 | ಆಯಾ ಕ್ಷೇತ್ರದ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 4 | ಸಂಬಂಧಪಟ್ಟ ತಾಲ್ಲೂಕು ಪಂಚಾಯತ್ ಕಾರ್ಯ ನಿರ್ವಾಹಣಾಧಿಕಾರಿಗಳು | ಸದಸ್ಯರು |

....2

| | | |
|---|---|---|
| 5 | ವಲಯ ಶಿಕ್ಷಣಾಧಿಕಾರಿಗಳು(B.E.O) | ಸದಸ್ಯರು |
| 6 | ಆಯಾ ತಾಲ್ಲೂಕಿನ ತಹಶೀಲ್ದಾರರು | ಸದಸ್ಯರು |
| 7 | ಆಯಾ ತಾಲ್ಲೂಕಿನ ಸ್ಥಳೀಯ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಗಳು | ಸದಸ್ಯರು |
| 8 | ಸಮಾಜ ಕಲ್ಯಾಣ ಇಲಾಖೆ/ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯಾ ತಾಲ್ಲೂಕಿನ ವಿಸ್ತರಣಾಧಿಕಾರಿಗಳು | ಸದಸ್ಯ ಕಾರ್ಯದರ್ಶಿ |

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಬಾಟ್)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,

1. ಮಹಾಲೇಖಪಾಲರು,ಕರ್ನಾಟಕ,ಬೆಂಗಳೂರು.
2. ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,ಬೆಂಗಳೂರು
4. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ,ಬೆಂಗಳೂರು.
5. ಸಂಬಂಧಪಟ್ಟ ಆಯಾ ಕ್ಷೇತ್ರದ ಶಾಸಕರುಗಳು/ವಿಧಾನ ಪರಿಷತ್ತಿನ ಸದಸ್ಯರುಗಳಿಗೆ
6. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
7. ಎಲ್ಲಾ ತಾಲ್ಲೂಕಿನ ತಹಶೀಲ್ದಾರುಗಳಿಗೆ
8. ಎಲ್ಲಾ ತಾಲ್ಲೂಕಿನ ಸಹಾಯಕ ಶಿಕ್ಷಣಾಧಿಕಾರಿಗಳಿಗೆ
9. ಎಲ್ಲಾ ತಾಲ್ಲೂಕಿನ ಸ್ಥಳೀಯ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಗಳಿಗೆ
10. ಎಲ್ಲಾ ತಾಲ್ಲೂಕಿನ ಸಂಬಂಧಪಟ್ಟ ಇಲಾಖೆಗಳ ವಿಸ್ತರಣಾಧಿಕಾರಿಗಳು
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

(Items 5–10:) ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರು ಇವರ ಮೂಲಕ

(133)

ಕರ್ನಾಟಕ ಸರ್ಕಾರ

ಸಂ:ಸಕಇ 221 ಬಿಎಂಎಸ್ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,2ನೇ ಮಹಡಿ,
ಬೆಂಗಳೂರು, ದಿನಾಂಕ 0 -07-2009.

## ಸೇರ್ಪಡೆ

ಸರ್ಕಾರದ ಆದೇಶ ಸಂ:ಸಕಇ 197 ಬಿಎಂಎಸ್ 2008, ದಿನಾಂಕ 07.01.2009ರ ಆದೇಶ ಭಾಗದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ಪೂರ್ವ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ತಾಲ್ಲೂಕು ಮಟ್ಟದ ಆಯ್ಕೆ ಸಮಿತಿ ರಚಿಸಿದಂತೆ ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗೂ ಸಹಾ ಅನ್ವಯಿಸುವಂತೆ ಸೇರ್ಪಡೆ ಮಾಡಿದ್ದು ಅದರಂತೆ ಓದಿಕೊಳ್ಳತಕ್ಕದ್ದು.

10.7.09

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಬಾಟ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

7/7/09

ಇವರಿಗೆ:

1.ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2.ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3.ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
4.ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
5.ಸಂಬಂಧಪಟ್ಟ ಆಯಾ ಕ್ಷೇತ್ರದ ಶಾಸಕರು/ಸದಸ್ಯರುಗಳಿಗೆ
6.ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
7.ಎಲ್ಲಾ ತಾಲ್ಲೂಕಿನ ತಹಶೀಲ್ದಾರರುಗಳಿಗೆ
8.ಎಲ್ಲಾ ತಾಲ್ಲೂಕಿನ ಸಹಾಯಕ ಶಿಕ್ಷಣಾಧಿಕಾರಿಗಳಿಗೆ
9.ಎಲ್ಲಾ ತಾಲ್ಲೂಕಿನ ಸ್ಥಳೀಯ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಗಳಿಗೆ
10.ಎಲ್ಲಾ ತಾಲ್ಲೂಕಿನ ಸಂಬಂಧಪಟ್ಟ ಇಲಾಖೆಗಳ ವಿಸ್ತರಣಾಧಿಕಾರಿಗಳಿಗೆ
11.ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

(5–10:) ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮುಖಾಂತರ

ಸಂ.ಹಿಂವಕನಿ:ವನಿಶಾ-2:ಸಿಆರ್-158:2008-09

ನಿರ್ದೇಶಕರ ಕಛೇರಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ನಂ.16-ಡಿ, 3ನೇ ಮಹಡಿ, ದೇವರಾಜ ಅರಸು ಭವನ
ಮಿಲ್ಲರ್ಸ್ ಟ್ಯಾಂಕ್‌ಬೆಡ್ ಏರಿಯಾ, ವಸಂತ ನಗರ
ಬೆಂಗಳೂರು-52, ದಿನಾಂಕ 15.7.2009

**ಪ್ರತಿಯನ್ನು ಕೆಳಕಂಡವರಿಗೆ ಮಾಹಿತಿ ಹಾಗೂ ಜರೂರು ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.**

1) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
2) ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳವರಿಗೆ ಕಳುಹಿಸಿ, ಈ ಆದೇಶದ ಪ್ರತಿಯನ್ನು ಕೆಳಕಂಡವರಿಗೆ ತಪ್ಪದೆ ಕಳುಹಿಸಲು ತಿಳಿಯಪಡಿಸಿದೆ.

1) ಸಂಬಂಧಪಟ್ಟ ಆಯಾ ಕ್ಷೇತ್ರದ ಶಾಸಕರುಗಳು/ಸದಸ್ಯರುಗಳು
2) ಎಲ್ಲಾ ತಾಲ್ಲೂಕಿನ ತಹಶೀಲ್ದಾರರು
3) ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು
4) ಎಲ್ಲಾ ತಾಲ್ಲೂಕು ಪಂಚಾಯತ್‌ನಲ್ಲಿರುವ ಸಂಬಂಧಪಟ್ಟ ಇಲಾಖೆಗಳ ವಿಸ್ತರಣಾಧಿಕಾರಿಗಳು
5) ಎಲ್ಲಾ ತಾಲ್ಲೂಕಿನ ಸ್ಥಳೀಯ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಗಳು
6) ಎಲ್ಲಾ ತಾಲ್ಲೂಕಿನ ಸಹಾಯಕ ಶಿಕ್ಷಣಾಧಿಕಾರಿಗಳು

15/7/09

**ನಿರ್ದೇಶಕರ ಪರವಾಗಿ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಬೆಂಗಳೂರು.**